ಕ್ರಮಗಳೇನು?

ಈ) ಸಣ್ಣ ಕೈಗಾರಿಕೆಗಳು ರೋಗಗ್ರಸ್ತವಾಗುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎಸ್. ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು):

ಅ) 42966

ಆ) 161(ಆರ್. ಬಿ. ಐ ನಾರ್ಮ್ಸ್ ಪ್ರಕಾರ)

ಇ) ಸರ್ಕಾರದ ನಿಯಮಾವಳಿ ಪ್ರಕಾರ ಒಟ್ಟು 29 ಸಣ್ಣ ಪ್ರಮಾಣದ ರೋಗಗ್ರಸ್ಥ ಕೈಗಾರಿಕೆಗಳಿಗೆ ಈ ಕೆಳಕಂಡ ಸಹಾಯ ಸೌಲಭ್ಯ ಕಲ್ಪಿಸಲಾಗುತ್ತಿದೆ.

1) ಅರ್ಹವಿರುವ ರೋಗಗ್ರಸ್ಥ ಕೈಗಾರಿಕಾ ಘಟಕಗಳಿಗೆ ಸರ್ಕಾರದ ವತಿಯಿಂದ ರೂ.2.50 ಲಕ್ಷಗಳವರೆಗೆ ಬೀಜಧನ ಸಾಲ ಮಂಜೂರಾತಿ ಮಾಡಲು ಅವಕಾಶವಿದೆ.

2) 16 ರೋಗಗ್ರಸ್ಥ ಸಣ್ಣ ಪ್ರಮಾಣದ ಕೈಗಾರಿಕೆಗಳಿಗೆ ಪುನಃಶ್ಚೇತನ ಯೋಜನೆಯಡಿಯಲ್ಲಿ ಈಗಾಗಲೇ ರೂ.21.43ಲಕ್ಷಗಳ ಬೀಜಧನ ಸಾಲ ಸೌಲಭ್ಯವನ್ನು ಒದಗಿಸಲಾಗಿದೆ.

3) 9 ರೋಗಗ್ರಸ್ಥ ಸಣ್ಣ ಪ್ರಮಾಣದ ಕೈಗಾರಿಕೆಗಳಿಗೆ ಪುನಃಶ್ಚೇತನ ಯೋಜನೆಯಡಿಯಲ್ಲಿ ಸುಲಭ ಕಂತುಗಳಲ್ಲಿ ಮಾರಾಟಕರ ತೆರಿಗೆ ಬಾಕಿ ಹಾಗೂ ವಿದ್ಯುಚ್ಛಕ್ತಿ ಬಿಲ್ ಬಾಕಿ ಪಾವತಿಸಲು ಅನುಕೂಲ ಮಾಡಿಕೊಡಲಾಗಿದೆ.

ಈ) ರೋಗಗ್ರಸ್ತ ಸಣ್ಣ ಕೈಗಾರಿಕೆಗಳ ಸಮಸ್ಯೆಗಳನ್ನು ಬಗೆಹರಿಸಲು ಜಿಲ್ಲಾ ಕೈಗಾರಿಕಾ ಕೇಂದ್ರಗಳ ಜಂಟಿ ನಿರ್ದೇಶಕರುಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಮಟ್ಟದ ಟಾಸ್ಕ್‌ಫೋರ್ಸ್ ಸಮಿತಿಗಳನ್ನು ರಚಿಸಲಾಗಿದೆ. ಈ ಸಮಿತಿಗೆ ರೋಗಗ್ರಸ್ತ ಕೈಗಾರಿಕೆಗಳನ್ನು ಅವುಗಳ ಪ್ರಾರಂಭಿಕ ಹಂತದಲ್ಲಿಯೇ ಗುರುತಿಸಿ ಅವುಗಳು ರೋಗಗ್ರಸ್ತವಾಗುವುದನ್ನು ತಪ್ಪಿಸಲು ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗಿದೆ.

ದೊಮ್ಮರಹಳ್ಳಿ ಪ್ರೌಢಶಾಲೆಗೆ ಬಿ.ಸಿ.ಎಂ. ಹಾಸ್ಟೆಲ್ ಮಂಜೂರು.

289(459)

ಶ್ರೀ ಲಕ್ಷ್ಮೀನಾರಾಯಣ ಎಂ.ಡಿ.(ತುರುವೇಕೆರೆ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ದೊಮ್ಮರನ ಹಳ್ಳಿಯಲ್ಲಿ ಗ್ರಾಮಾಂತರ ಪ್ರೌಢಶಾಲೆ ಇದ್ದು, ಬಹಳ ಹಿಂದುಳಿದ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಹಿಂದುಳಿದ ಗ್ರಾಮಾಂತರ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಮಂಜೂರು ಮಾಡುವ ಕುರಿತು ಸರ್ಕಾರದ ನಿಲುವೇನು;

ಇ) ಯಾವಾಗ ಮಂಜೂರಾತಿ ನೀಡಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಇಲ್ಲ

ಆ) ಅನ್ವಯಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ತುರುವೇಕೆರೆ ನಗರದ ಹೊರ ವಲಯದಲ್ಲಿ ವಾಸಮಾಡುವ ಗುಡಿಸಲು ವಾಸಿಗಳಿಗೆ ಸಾಮೂಹಿಕ ಶೌಚಾಲಯ ನಿರ್ಮಾಣ.

290(460)

ಶ್ರೀ ಲಕ್ಷ್ಮೀನಾರಾಯಣ ಎಂ.ಡಿ(ತುರುವೇಕೆರೆ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ನಗರದ ಕೆ.ಇ.ಬಿ. ಸ್ಟೇಷನ್ ಪಕ್ಕದಲ್ಲಿ ವಾಸವಾಗಿರುವ ಗುಡಿಸಲು ವಾಸಿಗಳಿಗೆ ಸಾಮೂಹಿಕ ಶೌಚಾಲಯ ಇಲ್ಲದೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಶೌಚಾಲಯವನ್ನು ನಿರ್ಮಿಸಿಕೊಡುವಲ್ಲಿ ಸರ್ಕಾರದ ನಿಲುವೇನು;

ಇ) ಇನ್ನು ಎಷ್ಟು ದಿನಗಳಲ್ಲಿ ಶೌಚಾಲಯ ನಿರ್ಮಿಸಿ ಕೊಡಬಹುದು?